ಐತಿಹಾಸಿಕ ಸ್ಥಳಗಳನ್ನು ಪ್ರವಾಸೋದ್ಯಮ ಪಟ್ಟಿಯಲ್ಲಿ ಸೇರಿಸತಕ್ಕದ್ದು.

169(1364) ಶ್ರೀ ಅಮರೇಗೌಡ ಲಿಂಗನಗೌಡ ಬಯ್ಯಾಪುರ:(ಕುಷ್ಟಗಿ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ಎಷ್ಟು ಐತಿಹಾಸಿಕ ಸ್ಥಳಗಳನ್ನು ಪ್ರವಾಸೋದ್ಯಮ ಇಲಾಖೆ ಪಟ್ಟಿಯಲ್ಲಿ ಸೇರಿಸಿಕೊಳ್ಳಲಾಗಿದೆ;(ಅವು ಯಾವುವು);

ಆ) ಈ ಪೈಕಿ ಕುಷ್ಟಗಿ ತಾಲ್ಲೂಕಿನ ಯಾವ ಯಾವ ಐತಿಹಾಸಿಕ ಸ್ಥಳಗಳನ್ನು ಪ್ರವಾಸೋದ್ಯಮ ಪಟ್ಟಿಯಲ್ಲಿ ಸೇರಿಸಿಕೊಳ್ಳಲಾಗಿದೆ;

ಇ) ಕುಷ್ಟಗಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಚಂದಾಲಿಂಗೇಶ್ವರ ದೇವಸ್ಥಾನ, ಹನುಮಸಾಗರ, ಶ್ರೀ ಸೋಮಲಿಂಗೇಶ್ವರ ದೇವಸ್ಥಾನಪುರ, ಶ್ರೀ ದೊಡ್ಡ ಬಸವೇಶ್ವರ, ದೇವಸ್ಥಾನ ಎಂ.ಗೂಡದೂರು, ಈ ಐತಿಹಾಸಿಕ ಸ್ಥಳಗಳು ಪ್ರವಾಸೋದ್ಯಮ ಪಟ್ಟಿಯಲ್ಲಿ ಸೇರಿವೆಯೇ;

ಈ) ಈ ದೇವಸ್ಥಾನಗಳ ಬಳಿ ಪ್ರವಾಸಿಗರ ಅನುಕೂಲಕ್ಕಾಗಿ ವಸತಿ ಸೌಕರ್ಯ ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ದೊರಕಿಸಿಕೊಡುವ ನಿಟ್ಟಿನಲ್ಲಿ ಇಲಾಖೆಯ ತೆಗೆದುಕೊಂಡ ಕ್ರಮಗಳೇನು?

ಶ್ರೀ ಜಿ ಜನಾರ್ಧನರೆಡ್ಡಿ(ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ಸಚಿವರು)

ಅ) ಕೊಪ್ಪಳ ಜಿಲ್ಲೆಯಲ್ಲಿನ ಕೆಳಕಂಡ ಸ್ಥಳಗಳನ್ನು ಪ್ರವಾಸಿ ಸ್ಥಳಗಳೆಂದು ಗುರುತಿಸಲಾಗಿದೆ.

ಕೊಪ್ಪಳ, ಆನೆಗುಂದಿ, ಇಟಗಿ, ಕಕನೂರು, ಕನಕಗಿರಿ.

ಆ) ಕುಷ್ಟಗಿ ತಾಲ್ಲೂಕಿಗೆ ಸಂಬಂಧಿಸಿದಂತೆ ಯಾವುದೇ ಸ್ಥಳವನ್ನು ಪ್ರವಾಸಿ ಸ್ಥಳವೆಂದು ಗುರುತಿಸಿರುವುದಿಲ್ಲ.

ಇ) ಸೇರಿರುವುದಿಲ್ಲ

ಈ) ಹನುಮಸಾಗರದ ಶ್ರೀ ಚಂದಾಲಿಂಗೇಶ್ವರ ದೇವಾಲಯ, ಪುರ ಗ್ರಾಮದ ಶ್ರೀ ಸೋಮಲಿಂಗೇಶ್ವರ ದೇವಾಲಯ, ಎಂ.ಗುಡದೂರಿನ ಶ್ರೀ ದೊಡ್ಡ ಬಸವೇಶ್ವರ ದೇವಾಲಯಗಳ ಪ್ರದೇಶಗಳಲ್ಲಿ ಯಾತ್ರಿಕರ ಅನುಕೂಲಕ್ಕಾಗಿ ವಸತಿ

ಹಾಗೂ ಇನ್ನಿತರ ಸೌಲಭ್ಯಗಳನ್ನು ಕಲ್ಪಿಸಿಕೊಡಲು ಮನವಿ ಇದೆ. ಈ ಪ್ರದೇಶಗಳಲ್ಲಿ ಯಾವ ರೀತಿಯ ಸೌಲಭ್ಯಗಳನ್ನು ಕಲ್ಪಿಸಬಹುದೆಂಬ ಬಗ್ಗೆ ಮೇಲ್ಕಂಡ ಸ್ಥಳಗಳ ಪರಿಶೀಲನೆ ಮಾಡಿ ವರದಿಯನ್ನು ಕಳುಹಿಸಿಕೊಡುವಂತೆ ಜಿಲ್ಲಾಧಿಕಾರಿ, ಕೊಪ್ಪಳ ಜಿಲ್ಲೆ ರವರನ್ನು ಕೋರಲಾಗಿದೆ. ಜಿಲ್ಲಾಧಿಕಾರಿಗಳಿಂದ ವರದಿ ಬಂದ ನಂತರ ಅಗತ್ಯತೆಗನುಗುಣವಾಗಿ ಯುಕ್ತ ಕ್ರಮ ಕೈಗೊಳ್ಳಲಾಗುವುದು.

ಬಿ.ಬಿ.ಎಂ.ಪಿ.ಯ ವ್ಯಾಪ್ತಿಯ ಮಾಲ್‌ಗಳು

171(1358) ಶ್ರೀ ನರೇಂದ್ರಬಾಬು ನೆ ಲ:(ಮಹಾಲಕ್ಷ್ಮಿ ಲೇ ಔಟ್) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಎಷ್ಟು ಮಾಲ್‌ಗಳಿವೆ; ಇದರಲ್ಲಿನ ಸಿನಿಮಾ ಮಾಲ್‌ಗಳ ಸಂಖ್ಯೆ ಎಷ್ಟು?

ಆ) ಈ ಮಾಲ್ ಗಳಿಗೆ ಸರ್ಕಾರದ ವತಿಯಿಂದ ತೆರಿಗೆ ವಿನಾಯಿತಿ ನೀಡಲಾಗಿದೆಯೇ;

ಇ) ತೆರಿಗೆ ರಿಯಾಯಿತಿ ನೀಡಿದ್ದರೂ ಸಹ ದುಬಾರಿ ಬೆಲೆಗೆ ಟಿಕೇಟ್ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಕೈಗೊಳ್ಳುವ ಕ್ರಮವೇನು.

ಶ್ರೀ ಬಿ ಎಸ್ ಯಡಿಯೂರಪ್ಪ(ಮುಖ್ಯಮಂತ್ರಿಗಳು)

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ 42 ಮಾಲ್‌ಗಳಿದ್ದು, ಇವುಗಳಲ್ಲಿ ಚಿತ್ರಮಂದಿರಗಳನ್ನು ಹೊಂದಿರುವ ಮಾಲ್‌ಗಳ ಸಂಖ್ಯೆ 9 ಹಾಗೂ ಸಿನಿಮಾ ಮಂದಿರಗಳ ಸಂಖ್ಯೆ 44.

ಆ) ಸರ್ಕಾರದ ವತಿಯಿಂದ ಬೆಂಗಳೂರಿನ ಫೋರಮ್‌ಮಾಲ್‌ನಲ್ಲಿರುವ ಪಿ.ವಿ.ಆರ್. ಸಿನಿಮಾಗೆ ಮಾತ್ರ 2005ರಲ್ಲಿ ತೆರಿಗೆ ವಿನಾಯಿತಿ ನೀಡಿದ್ದಾಗ್ಯೂ